(ಈ ಹಂತದಲ್ಲಿ ಧರಣಿ ನಿರತ ವಿರೋಧ ಪಕ್ಷದ ಸದಸ್ಯರು "ರೈತ ವಿರೋಧಿ ಸರ್ಕಾರಕ್ಕೆ ಧಿಕ್ಕಾರ" ಎಂದು ಘೋಷಣೆಗಳನ್ನು ಕೂಗುತ್ತಿದ್ದರು.)

(ಗೊಂದಲ)

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು):– ಚರ್ಚೆ ಮಾಡುವುದಕ್ಕೋಸ್ಕರ ಸದನ ಕರೆಯಲಾಗಿದೆ. ಇವರು ಹೇಳುವುದನ್ನು ಕೇಳುವುದಿಲ್ಲ. ನಿಲುವಳಿ ಸೂಚನೆ ಕೊಟ್ಟಿದ್ದಾರೆ. ನಾವು ವಿರೋಧ ಮಾಡುತ್ತಿಲ್ಲ. ನಿಮಗೆ ಸಂಸದೀಯ ವ್ಯವಸ್ಥೆಯಲ್ಲಿ ನಂಬಿಕೆಯಿಲ್ಲ. ಅಸೆಂಬ್ಲಿ ನಡೆಯಬಾರದು ಎಂಬುದು ನಿಮ್ಮ ಉದ್ದೇಶವಾಗಿದೆ. ಮಾನ್ಯ ಅಧ್ಯಕ್ಷರೆ, adjournment motion ಕೊಟ್ಟಿದ್ದಾರೆ. ನಿಲುವಳಿ ಸೂಚನೆ ಕೊಟ್ಟಿದ್ದಾರೆ. ನೀವು ಇಲ್ಲಿ ರಾಜಕೀಯ ಮಾಡುವುದಕ್ಕೆ ಬಂದಿದ್ದೀರಿ. ಜನರ ಸಮಸ್ಯೆಗಳನ್ನು ಚರ್ಚೆ ಮಾಡುವುದಕ್ಕೆ ಬಂದಿಲ್ಲ.

(ಗೊಂದಲ)

ಅಧ್ಯಕ್ಷರು:– ನಿಯಮ 69ಕ್ಕೆ convert ಮಾಡಿದ್ದೇನೆ. ಚರ್ಚೆ ಶುರು ಮಾಡಿ.

(ಗೊಂದಲ)

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, ಪ್ರಶ್ನೋತ್ತರ ಆಗಬೇಕು. ಮೊದಲು ಪ್ರಶ್ನೋತ್ತರ ಆಗಬೇಕು.

(ಗೊಂದಲ)

ಅಧ್ಯಕ್ಷರು:– ಈಗ ಪ್ರಶ್ನೋತ್ತರ ಆಗಲಿ.

(ಗೊಂದಲ)

(ಈ ಹಂತದಲ್ಲಿ ಧರಣಿ ನಿರತ ಸದಸ್ಯರು ಘೋಷಣೆಗಳನ್ನು ಕೂಗುತ್ತಿದ್ದರು)

(ಗೊಂದಲ)